# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 459
ಸದಸ್ಯರ ಹೆಸರು : ಶ್ರೀ ಹೆಚ್.ಎಸ್.ಗೋಪಿನಾಥ್
(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ : 15.09.2022.
ಉತ್ತರಿಸುವ ಸಚಿವರು : ಕಂದಾಯ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ನಗರ ಹಾಗೂ ಸುತ್ತಮುತ್ತ ಒತ್ತುವರಿಯಾಗಿರುವ ಸರ್ಕಾರಿ ಜಮೀನುಗಳ ಅಂದಾಜು ಮತ್ತು ಈ ಹಿಂದೆ ಒತ್ತುವರಿಯಾಗಿ ಸಲ್ಲಿಕೆಯಾದ ವರದಿ ಬಗ್ಗೆ ಕೈಗೊಂಡ ಕ್ರಮಗಳೇನು; (ಸಂಪೂರ್ಣ ವಿವರ ಒದಗಿಸುವುದು) | ಬೆಂಗಳೂರು ನಗರ ಜಿಲ್ಲೆಯಲ್ಲಿ ಒಟ್ಟು 122,918 ಎಕರೆ ಸರ್ಕಾರಿ ಜಮೀನಿರುತ್ತದೆ. ಇದರಲ್ಲಿ 38,942 ಎಕರೆ ಜಮೀನು ಒತ್ತುವರಿಯಾಗಿರುತ್ತದೆ. ಈ ಪೈಕಿ 16,478 ಎಕರೆ ಜಮೀನನ್ನು ಒತ್ತುವರಿಯಿಂದ ತೆರವುಗೊಳಿಸಿ ಸರ್ಕಾರದ ವಶಕ್ಕೆ ಪಡೆಯಲಾಗಿರುತ್ತದೆ. ನಮೂನೆ 50, 53 ಹಾಗೂ ಕಲಂ 94ಸಿ ರಡಿಯಲ್ಲಿ 12,179 ಎಕರೆ ಜಮೀನಿನಲ್ಲಿ ಅರ್ಜಿ ಸಲ್ಲಿಸಿರುತ್ತಾರೆ. ನಮೂನೆ-50 ಮತ್ತು 53ರಡಿ ಸ್ವೀಕೃತವಾಗಿರುವ ಅನರ್ಹ ಅರ್ಜಿಗಳನ್ನು ತಿರಸ್ಕರಿಸಲು ಜಿಲ್ಲಾಧಿಕಾರಿಗಳಿಗೆ ಅವಕಾಶ ಕಲ್ಪಿಸಲಾಗಿದೆ. ವಿವಿಧ ನ್ಯಾಯಾಲಯಗಳಲ್ಲಿ ಮತ್ತು ಸಾರ್ವಜನಿಕ ಉದ್ದೇಶಗಳಿಗೆ ಒಟ್ಟು 1020 ಎಕರೆ ಜಮೀನು ಬಳಕೆಯಾಗಿರುತ್ತದೆ. ಉಳಿದಂತೆ 265 ಎಕರೆ ಜಮೀನನ್ನು ಒತ್ತುವರಿಯಿಂದ ತೆರವುಗೊಳಿಸಬೇಕಾಗಿದೆ.<br><br>ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಒಟ್ಟು 108295 ಎಕರೆ ಸರ್ಕಾರಿ ಜಮೀನಿರುತ್ತದೆ. ಇದರಲ್ಲಿ 36229 ಜಮೀನು ಒತ್ತುವರಿಯಾಗಿರುತ್ತದೆ.<br><br>ಈ ಪೈಕಿ 11779 ಎಕರೆ ಜಮೀನನ್ನು ಒತ್ತುವರಿಯಿಂದ ತೆರವುಗೊಳಿಸಿ ಸರ್ಕಾರದ ವಶಕ್ಕೆ ಪಡೆಯಲಾಗಿರುತ್ತದೆ. ನಮೂನೆ 50, 53 ಹಾಗೂ ಕಲಂ 94ಸಿ ರಡಿಯಲ್ಲಿ 23411 ಎಕರೆ ಜಮೀನಿನಲ್ಲಿ ಅರ್ಜಿ ಸಲ್ಲಿಸಿದ್ದು, ಸದರಿ ಅರ್ಜಿಗಳು ಇತ್ಯರ್ಥಕ್ಕೆ ಬಾಕಿ ಇರುವುದರಿಂದ ಒತ್ತುವರಿಯನ್ನು ತೆರವುಗೊಳಿಸಲು ಸಾಧ್ಯವಾಗಿರುವುದಿಲ್ಲ. ವಿವಿಧ ನ್ಯಾಯಾಲಯಗಳಲ್ಲಿ ಒಟ್ಟು 209 ಎಕರೆ ಜಮೀನು ಬಳಕೆಯಾಗಿರುತ್ತದೆ. ಉಳಿದಂತೆ 830 ಎಕರೆ ಜಮೀನನ್ನು ಒತ್ತುವರಿಯಿಂದ ತೆರವುಗೊಳಿಸ ಬೇಕಾಗಿರುತ್ತದೆ. |
| ಆ) | ಸರ್ಕಾರಿ ಜಾಗವನ್ನು ಸಂರಕ್ಷಿಸುವಲ್ಲಿ ಭೂಗಳ್ಳರ ವಿರುದ್ಧ ಈವರೆಗೂ ಸರ್ಕಾರ ಕೈಗೊಂಡ ಕ್ರಮಗಳೇನು; ವಿವರ ನೀಡುವುದು | ಸರ್ಕಾರಿ ಜಮೀನಿನ ಒತ್ತುವರಿಯನ್ನು ತೆರವುಗೊಳಿಸಲು ಸರ್ಕಾರದ ಆದೇಶ ಸಂಖ್ಯೆ:ಕಂಇ 155 ಎಲ್‌ಜಿಎಕ್ಸ್ 2013, ದಿ:19.08.2014ರನ್ವಯ ರಾಜ್ಯದ ಎಲ್ಲಾ ಜಿಲೆಗಳಲ್ಲಿ, ಜಿಲ್ಲಾಧಿಕಾರಿಯವರ ಅಧ್ಯಕ್ಷತೆಯಲ್ಲಿ ಕಾರ್ಯ ಪಡೆಗಳನ್ನು ರಚಿಸಲಾಗಿದೆ. ಅದರಂತೆ ಎಲ್ಲಾ ಜಿಲ್ಲಾಧಿಕಾರಿಗಳು ಕಾಲಬದ್ಧ ಕ್ರಿಯಾ ಯೋಜನೆ ಸಿದ್ಧಪಡಿಸಿಕೊಂಡು, ಒತ್ತುವರಿ ಆಗಿರುವ ಸರ್ಕಾರಿ ಜಮೀನುಗಳನ್ನು ತೆರವುಗೊಳಿಸಲು ಕ್ರಮವಹಿಸುತ್ತಿದ್ದಾರೆ.<br><br>ಒತ್ತುವರಿ ಪ್ರಕರಣಗಳನ್ನು ಸಮರ್ಥವಾಗಿ ತಡೆಯುವ ಸಲುವಾಗಿ ಕರ್ನಾಟಕ ಭೂ ಕಬಳಿಕೆ ನಿಷೇಧ ವಿಶೇಷ ನ್ಯಾಯಾಲಯವನ್ನು ರಚಿಸಲಾಗಿದೆ. ಒತ್ತುವರಿದಾರರ ವಿರುದ್ಧ ಕರ್ನಾಟಕ ಭೂ ಕಬಳಿಕೆ ನಿಷೇಧ ವಿಶೇಷ ನ್ಯಾಯಾಲದಲ್ಲಿ, ಕರ್ನಾಟಕ ಭೂ ಕಂದಾಯ ಕಾಯ್ದೆ, 1964 ಕಲಂ 192-ಎ ರನ್ವಯ ಪ್ರಕರಣವನ್ನು ದಾಖಲಿಸಲಾಗುತ್ತಿದೆ. |

| | | |
|---|---|---|
| | | ಸರ್ಕಾರಿ ಜಮೀನು ಒತ್ತುವರಿ ತೆರವುಗೊಳಿಸುವುದು, ಒತ್ತುವರಿದಾರರ ವಿರುದ್ಧ ಕ್ರಮ ಜರುಗಿಸುವುದು, ಒತ್ತುವರಿ ತೆರವುಗೊಳಿಸಲು ವಿಫಲರಾಗಿರುವ ಅಧಿಕಾರಿಗಳು/ಭೂ ಕಬಳಿಕೆಗೆ ದುಷ್ಪ್ರೇರಣೆ ನೀಡಲು ನಕಲಿ ದಾಖಲೆಗಳನ್ನು ಸೃಷ್ಟಿಸಲು ಶಾಮೀಲಾಗಿರುವ ಅಧಿಕಾರಿ/ಸಿಬ್ಬಂದಿಗಳ ವಿರುದ್ಧ ಕಾನೂನು/ ಶಿಸ್ತು ಕ್ರಮಗಳನ್ನು ಜರುಗಿಸಲು ಸರ್ಕಾರದ ಸುತ್ತೋಲೆ ಸಂಖ್ಯೆ: ಆರ್‌ಡಿ 20 ಎಲ್‌ಜಿಪಿ 2020, ದಿ: 20.01.2020ರಲ್ಲಿ ಎಲ್ಲಾ ಜಿಲ್ಲಾಧಿಕಾರಿಗಳಿಗೆ, ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ.<br><br>ರಾಜ್ಯದಲ್ಲಿರುವ ಸರ್ಕಾರಿ ಜಮೀನುಗಳ ಒತ್ತುವರಿ ತೆರವುಗೊಳಿಸಲು ಹಾಗೂ ಸಂರಕ್ಷಿಸಲು ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 15 ಎಲ್‌ಜಿಪಿ 2020; ದಿನಾಂಕ: 29.01.2020 ರ ಆದೇಶದ ಮೂಲಕ "ಸರ್ಕಾರಿ ಜಮೀನುಗಳ ಸಂರಕ್ಷಣಾ ಸಮಿತಿ"ಯನ್ನು ರಚಿಸಲಾಗಿದೆ, ಸದರಿ ಸಮಿತಿಯು ಎಲ್ಲಾ ಜಿಲ್ಲೆಗಳ ಸರ್ಕಾರಿ ಜಮೀನುಗಳಿಗೆ ಸಂಬಂಧಿಸಿದಂತೆ ಪ್ರತಿ ವಾರವೂ ಪರಿಶೀಲನಾ ಸಭೆಯನ್ನು ನಡೆಸುತ್ತಿದ್ದು, ಭೂ ಕಬಳಿಕೆ ತಡೆಯುವ ನಿಟ್ಟಿನಲ್ಲಿ ಅಗತ್ಯ ನಿರ್ದೇಶನಗಳನ್ನು ಸರ್ಕಾರಕ್ಕೆ ಕಾಲಕಾಲಕ್ಕೆ ನೀಡಲಾಗುತ್ತಿದೆ. |
| ಇ) | ವಶಪಡಿಸಿಕೊಂಡ ಸರ್ಕಾರಿ ಜಾಗವನ್ನು ಸದುಪಯೋಗ ಪಡಿಸಿಕೊಳ್ಳುವ ನಿಟ್ಟಿನಲ್ಲಿ ಸರ್ಕಾರದ ದೀರ್ಘಾವಧಿ ಯೋಜನೆ ಯಾವುದು; (ವಿವರ ಒದಗಿಸುವುದು) | ಬೆಂಗಳೂರು ನಗರ ಜಿಲ್ಲಾ ವ್ಯಾಪ್ತಿಯಲ್ಲಿ ಒತ್ತುವರಿಯಿಂದ ವಶಪಡಿಸಿಕೊಂಡ ಸರ್ಕಾರಿ ಜಾಗವನ್ನು ಸದುಪಯೋಗ ಪಡಿಸಿಕೊಳ್ಳುವ ನಿಟ್ಟಿನಲ್ಲಿ ರಾಜೀವ್‌ಗಾಂಧಿ ವಸತಿ ನಿಗಮ/ ಆಶ್ರಯ ಯೋಜನೆ/ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ/ ಘನತ್ಯಾಜ್ಯ ವಿಲೇವಾರಿ ಘಟಕ/ಆರೋಗ್ಯ ಕೇಂದ್ರ/ಆಟದ ಮೈದಾನ/ ಸಾರ್ವಜನಿಕ ಸ್ಮಶಾನ/ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ/ಕೆ.ಪಿ.ಟಿ.ಸಿ.ಎಲ್/ತೋಟಗಾರಿಕೆ ಇಲಾಖೆ ಹಾಗೂ ಇತರೆ ಸರ್ಕಾರದ ಸಾರ್ವಜನಿಕ ಉದ್ದೇಶಗಳಿಗೆ ಮೀಸಲಿಡಲು ಕ್ರಮ ಕೈಗೊಳ್ಳಲಾಗಿರುತ್ತದೆ. |

ಸಂಖ್ಯೆ: ಆರ್‌ಡಿ 181 ಎಲ್‌ಜಿಕ್ಯೂ 2022

(ಆರ್.ಅಶೋಕ)
ಕಂದಾಯ ಸಚಿವರು